ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಆಧಾರ್ ಕಾರ್ಡ್ ಕೇಂದ್ರ ಸ್ಥಾಪಿಸುವ ಬಗ್ಗೆ

ಶ್ರೀ ಘೊಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1131 (1281) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಆಧಾರ್ ಕಾರ್ಡ್ ಮಾಡಿಕೊಳ್ಳಲು ಸಾರ್ವಜನಿಕರು/ವಿದ್ಯಾರ್ಥಿಗಳು ಅಲೆದಾಡುತ್ತಿದ್ದು, ಕೆಲವೊಂದು ತಾಲ್ಲೂಕಿನಲ್ಲಿ ಒಂದೇ ಕೇಂದ್ರ ಇರುವುದರಿಂದ ಜನರು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು)

(ಆ) ಜಿಲ್ಲೆಯ ವಿವಿಧ ತಾಲ್ಲೂಕಿನಲ್ಲಿ ಚಾಲನೆಯಲ್ಲಿರುವ ಆಧಾರ್ ಕಾರ್ಡ್ ಕೇಂದ್ರಗಳಾವುವು; (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

(ಇ) ಸಾರ್ವಜನಿಕ ಹಿತದೃಷ್ಟಿಯಿಂದ ಪ್ರತಿಯೊಂದು ತಾಲ್ಲೂಕಿನಲ್ಲಿ ಕನಿಷ್ಠ 2 ರಿಂದ 3 ಆಧಾರ್ ಕಾರ್ಡ್ ಕೇಂದ್ರಗಳನ್ನು ಸ್ಥಾಪನೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ?